# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ನೀಡುತ್ತಿರುವ ಮಾಸಾಶನವನ್ನು ಹೆಚ್ಚಿಸುವ ಕುರಿತು.**

**ಓದಲಾಗಿದೆ: 1.ಸರ್ಕಾರಿ ಆದೇಶ ಸಂಖ್ಯೆ:ಕಂಇ 3 ಪಿಹೆಚ್‌ಪಿ 2008, ದಿನಾಂಕ:29/08/2008**

**2.ಸರ್ಕಾರಿ ಆದೇಶ ಸಂಖ್ಯೆ:ಮಮಇ 157 ಮುಮ 07, ದಿನಾಂಕ: 26/04/2007**

**3.ಸರ್ಕಾರಿ ಆದೇಶ ಸಂಖ್ಯೆ: ಕಂಇ 147 ಎಂಎಸ್‌ಟಿ 2007, ದಿನಾಂಕ: 12/01/2012**

**ಪ್ರಸ್ತಾವನೆ:**

ರಾಜ್ಯ ಸರ್ಕಾರವು, ಬಡತನ ರೇಖೆಗಿಂತ ಕೆಳಗಿರುವ ಅಸಹಾಯಕ ವೃದ್ಧರಿಗೆ,ವಿಧವೆಯರಿಗೆ ಹಾಗೂ ಅಂಗವಿಕಲರಿಗೆ, ಸಾಮಾಜಿಕ ಹಾಗೂ ಆರ್ಥಿಕ ಭದ್ರತೆಯನ್ನೊದಗಿಸಲು ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನವನ್ನು ಅರ್ಹ ಫಲಾನುಭವಿಗಳಿಗೆ ನೀಡುತ್ತಿರುತ್ತದೆ.

ಮೇಲೆ ಓದಲಾದ ಉಲ್ಲೇಖ(1)ರಂತೆ, ಅಂಗವಿಕಲ ವೇತನದಡಿ, ಶೇಕಡಾ 40ರಿಂದ 75 ರಷ್ಟು ಅಂಗವೈಕಲ್ಯವಿರುವ ಯೋಜನೆಯಡಿ ಅರ್ಹ ಅಂಗವಿಕಲರಿಗೆ ರೂ.400 ಗಳ ಮಾಸಾಶನವನ್ನು, ಶೇಕಡಾ 75ಕ್ಕಿಂತ ಹೆಚ್ಚು ಅಂಗವೈಕಲ್ಯತೆ ಇರುವ ಯೋಜನೆಯಡಿ ಅರ್ಹ ಅಂಗವಿಕಲರಿಗೆ ರೂ.1000ಗಳ ಮಾಸಾಶನವನ್ನು ನೀಡಲಾಗುತ್ತಿದೆ.

ಮೇಲೆ ಓದಲಾದ ಉಲ್ಲೇಖ(2)ರಂತೆ, ನಿರ್ಗತಿಕ ವಿಧವಾ ವೇತನದಡಿ ಅರ್ಹ ಫಲಾನುಭವಿಗಳಿಗೆ ರೂ.400ರ ಮಾಸಾಶನ ನೀಡಲಾಗುತ್ತಿದೆ.

ಮೇಲೆ ಓದಲಾದ ಉಲ್ಲೇಖ(3) ರಂತೆ, ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ 80 ವರ್ಷಕ್ಕಿಂತ ಹೆಚ್ಚು ವಯಸ್ಸಿನ ಅರ್ಹ ಫಲಾನುಭವಿಗಳಿಗೆ ರೂ.500ರ ಮಾಸಾಶನ ನೀಡಲಾಗುತ್ತಿದ್ದೆ. ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನದ ಮೊತ್ತವನ್ನು ಕೆಳಕಂಡಂತೆ ಹೆಚ್ಚಿಸಲು ಸರ್ಕಾರ ತೀರ್ಮಾನಿಸಿದೆ.

ಅಂಗವಿಕಲರ ವೇತನದಡಿ, ಶೇಕಡಾ 40ರಿಂದ 75 ರಷ್ಟು ಅಂಗವೈಕಲ್ಯವಿರುವ, ಯೋಜನೆಯಡಿ ಅರ್ಹ ಅಂಗವಿಕಲರಿಗೆ ನೀಡುತ್ತಿರುವ ಮಾಸಾಶನವನ್ನು ರೂ.400 ರಿಂದ ರೂ.500ಕ್ಕೆ ಹೆಚ್ಚಿಸಲು ಹಾಗೂ ಶೇಕಡಾ 75ಕ್ಕಿಂತ ಹೆಚ್ಚು ಅಂಗವೈಕಲ್ಯತೆ ಇರುವ, ಯೋಜನೆಯಡಿ ಅರ್ಹ ಅಂಗವಿಕಲರಿಗೆ ನೀಡುತ್ತಿರುವ ಮಾಸಾಶನವನ್ನು ರೂ.1000ಗಳಿಂದ ರೂ.1200 ಗಳಿಗೆ ಹೆಚ್ಚಿಸಲು ತೀರ್ಮಾನಿಸಿದೆ.

ನಿರ್ಗತಿಕ ವಿಧವಾ ವೇತನದಡಿ ಅರ್ಹ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನವನ್ನು ರೂ.400ರಿಂದ ರೂ.500ಕ್ಕೆ ಹೆಚ್ಚಿಸಲು ತೀರ್ಮಾನಿಸಿದೆ.

ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ 80 ವರ್ಷಕ್ಕಿಂತ ಹೆಚ್ಚು ವಯಸ್ಸಿನ ಅರ್ಹ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನವನ್ನು ರೂ.500 ರಿಂದ ರೂ.750ಕ್ಕೆ ಹೆಚ್ಚಿಸಲು ತೀರ್ಮಾನಿಸಿರುವ ಹಿನ್ನಲೆಯಲ್ಲಿ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 74 ಡಿಎಸ್‌ಪಿ 2013, ಬೆಂಗಳೂರು. ದಿನಾಂಕ:30/08/2013,**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಮಾಸಾಶನದ ಮೊತ್ತವನ್ನು ಕೆಳಕಂಡಂತೆ ಹೆಚ್ಚಿಸಿ 01-09-2013ರಿಂದ ಜಾರಿಗೆ ಬರುವಂತೆ ಆದೇಶಿಸಿದೆ.

1. ಅಂಗವಿಕಲರ ವೇತನದಡಿ,

   i. ಶೇಕಡಾ 40 ರಿಂದ 75 ರಷ್ಟು ಅಂಗವೈಕಲ್ಯವಿರುವ ಯೋಜನೆಯಡಿ ಅರ್ಹ ಅಂಗವಿಕಲರಿಗೆ ನೀಡುತ್ತಿರುವ ಮಾಸಾಶನವನ್ನು ರೂ.400 ರಿಂದ ರೂ.500ಕ್ಕೆ ಹೆಚ್ಚಿಸಲಾಗಿದೆ.

   ii. ಶೇಕಡಾ 75ಕ್ಕಿಂತ ಹೆಚ್ಚು ಅಂಗವೈಕಲ್ಯತೆ ಇರುವ ಯೋಜನೆಯಡಿ ಅರ್ಹ ಅಂಗವಿಕಲರಿಗೆ ನೀಡುತ್ತಿರುವ ಮಾಸಾಶನವನ್ನು ರೂ.1000ಗಳಿಂದ ರೂ.1200 ಗಳಿಗೆ ಹೆಚ್ಚಿಸಲಾಗಿದೆ.

2. ನಿರ್ಗತಿಕ ವಿಧವಾ ವೇತನದಡಿ ಅರ್ಹ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನವನ್ನು ರೂ.400ರಿಂದ ರೂ.500ಕ್ಕೆ ಹೆಚ್ಚಿಸಲಾಗಿದೆ.

3. ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ 80 ವರ್ಷಕ್ಕಿಂತ ಹೆಚ್ಚು ವಯಸ್ಸಿನ ಅರ್ಹ ಫಲಾನುಭವಿಗಳಿಗೆ ನೀಡುತ್ತಿರುವ ಮಾಸಾಶನವನ್ನು ರೂ.500 ರಿಂದ ರೂ.750ಕ್ಕೆ ಹೆಚ್ಚಿಸಲಾಗಿದೆ.

ಪಿಂಚಣಿ ಮೊತ್ತವನ್ನು ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳಡಿ ಈಗಾಗಲೇ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳಿಗೆ ಹೆಚ್ಚಳ ಮಾಡಿ ವಿತರಿಸುವ ಅಧಿಕಾರವನ್ನು ನಿರ್ದೇಶಕರು, ಖಜಾನೆ ನಿರ್ದೇಶನಾಲಯ ಹಾಗೂ ಜಿಲ್ಲಾ ಖಜಾನಾಧಿಕಾರಿಗಳು/ಉಪ ಖಜಾನಾಧಿಕಾರಿಗಳು ಇವರಿಗೆ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಈ ಆದೇಶವನ್ನು, ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆ.ಇ.477 ವೆಚ್ಚ–7/2013 ದಿನಾಂಕ:23–08–2013ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
30/8/2013
(ಎಸ್. ಕಾತ್ಯಾಯಿನಿ ದೇವಿ)
ಪೀಠಾಧಿಕಾರಿಗಳು
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,
ಕಂದಾಯ ಇಲಾಖೆ

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ)(ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಕಂದಾಯ ಇಲಾಖೆ, ಬೆಂಗಳೂರು.
5. ಮಾನ್ಯ ಮುಖ್ಯ ಮಂತ್ರಿಗಳವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು(ಅ ಮತ್ತು ಸ), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
7. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಬೆಳಗಾವಿ/ಮೈಸೂರು/ಗುಲ್ಬರ್ಗಾ.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಸಂಬಂಧಪಟ್ಟ ಉಪ ವಿಭಾಗಾಧಿಕಾರಿಗಳು/ತಹಸೀಲ್ದಾರರುಗಳಿಗೆ.
11. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
12. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.